2. **ಬೆಳ್ತಂಗಡಿ ಮುಲ್ಕಿ ರಾಜ್ಯ ಹೆದ್ದಾರಿ ಸಂಖ್ಯೆ:** 70 ರಸ್ತೆಯ 33.85 ಕಿ.ಮೀ. ಗಳಷ್ಟು ಉದ್ದವಿದ್ದು, ಕಿನ್ನಿಗೋಳಿ ಮೂರು ಕಾವೇರಿ ಮುಖಾಂತರ ಹಾದು ಹೋಗುತ್ತದೆ. 2011–12ನೇ ಸಾಲಿನಲ್ಲಿ 3054–ರಾಜ್ಯ ಹೆದ್ದಾರಿ ಲೆಕ್ಕಶೀರ್ಷಿಕೆಯಡಿ ಬಿಡುಗಡೆಯಾದ ರೂ. 5–00 ಲಕ್ಷಗಳ ಅನುದಾನದಲ್ಲಿ ಗುಂಡಿಗಳನ್ನು ಮುಚ್ಚಿ ಸಂಚಾರಕ್ಕೆ ಯೋಗ್ಯವನ್ನಾಗಿಡಲಾಗಿದೆ.

ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಕುರಿತು

ಶ್ರೀ ಅಭಯಚಂದ್ರ ಜೈನ್ ಕೆ. (ಮೂಡಬಿದ್ರೆ) :–

243(470) ಮಾನ್ಯ ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

(ಅ) ಮೂಡಬಿದ್ರೆ ಪುರಸಭೆ ಮತ್ತು ಮೂಲ್ಕಿ ಪಟ್ಟಣ ಪಂಚಾಯಿತಿಯಲ್ಲಿ ಒಳಚರಂಡಿ (ಯುಜಿಡಿ) ವ್ಯವಸ್ಥೆ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ 2011–12ನೇ ಸಾಲಿನಲ್ಲಿ ಈ ಸ್ಥಳೀಯ ಸಂಸ್ಥೆಗಳಿಗೆ ಒಳಚರಂಡಿ (ಯುಜಿಡಿ) ವ್ಯವಸ್ಥೆ ಕಲ್ಪಿಸಲು ಉದ್ದೇಶಿಸಿದೆಯೇ?

ಶ್ರೀ ಎಸ್. ಸುರೇಶ್‌ಕುಮಾರ್ (ಮಾನ್ಯ ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :–

(ಅ) ಬಂದಿದೆ

(ಆ) ಮೂಡಬಿದ್ರೆ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಮಂಡಳಿಯ ಅನುಮೋದಿತ 2011–12ನೇ ಸಾಲಿನ ಕ್ರಿಯಾ ಯೋಜನೆಯಡಿಯಲ್ಲಿ ರೂ. 16.00 ಕೋಟಿಗಳ ಮೊತ್ತವನ್ನು ಅನುವು ಮಾಡಲಾಗಿದೆ. ಮಂಡಳಿ ಈ ಯೋಜನೆಯ ಸರ್ವೇ ಕಾರ್ಯಮುಗಿಸಿದ್ದು, ಅಂದಾಜು ಪಟ್ಟಿಯನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿದ ನಂತರ ಮಂಜೂರಾತಿಗೆ ಸೂಕ್ತ ಕ್ರಮ ವಹಿಸಲಾಗುವುದು.

ಮುಲ್ಕಿ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಮಂಡಳಿಯ 2011–12ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅವಕಾಶ ಕಲ್ಪಿಸಿರುವುದಿಲ್ಲ. ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಮಂಡಳಿ ವತಿಯಿಂದ ಸರ್ವೆ ಕಾರ್ಯವು ಮುಗಿದಿದ್ದು, ಮಂಡಳಿಯು ತನ್ನ ಕ್ರಿಯಾ ಯೋಜನೆಯಲ್ಲಿ ಈ ಯೋಜನೆಯನ್ನು ಸೇರಿಸಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಅಂದಾಜು ಪಟ್ಟಿ ಸಮೇತ ಸಲ್ಲಿಸಿದ ನಂತರ ಮಂಜೂರಾತಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು.